ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಶುಕ್ರವಾರ, ದಿನಾಂಕ : 05 ನೇ ಫೆಬ್ರುವರಿ, 2021

ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಬಗ್ಗೆ

ಶ್ರೀ ಆರ್. ಧರ್ಮಸೇನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

419 (556) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದ ಬಹುತೇಕ ಹಳ್ಳಿಗಳಲ್ಲಿ ಜನ ಮತ್ತು ಜಾನುವಾರುಗಳಿಗೆ ಕುಡಿಯುವ ನೀರಿನ ಕೊರತೆಯಿಂದ ತೊಂದರೆಗೆ ಒಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕುಡಿಯುವ ನೀರು ಪೂರೈಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಆ) ರಾಜ್ಯದಲ್ಲಿ ಈಗ ಕಾರ್ಯಗತಗೊಂಡಿರುವ ಹಾಗೂ ಕಾರ್ಯಗತಗೊಳಿಸುತ್ತಿರುವ ಕುಡಿಯುವ ನೀರಿನ ಯೋಜನೆಗಳಾವುವು;

(ಇ) ರಾಜ್ಯದಲ್ಲಿ ಕಳೆದ 2 ವರ್ಷಗಳಲ್ಲಿ ಟ್ಯಾಂಕರುಗಳ ಮೂಲಕ ಕುಡಿಯುವ ನೀರು ಪೂರೈಸಲು ವ್ಯಯವಾಗಿರುವ ಹಣವೆಷ್ಟು? (ವಿವರ ಒದಗಿಸುವುದು)